# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎನ್.ಜಿ.ಶೇಖರಪ್ಪ, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಕಾಗಿನಲ್ಲಿ, ಶಿಕಾರಿಪುರ ತಾಲ್ಲೂಕು ಹಾಗೂ ಶ್ರೀ ಹೆಚ್.ಸೂರಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಶಿಕಾರಿಪುರ ಇವರುಗಳ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-2 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BD-5176 /2012/ ARE-6 ದಿನಾಂಕ. 21.09.2016.

2) ಮಾನ್ಯ ಉಪ ಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BD-5176 /2012/ ARE-6 ದಿನಾಂಕ. 19.09.2016.

-----

**ಪ್ರಸ್ತಾವನೆ**

ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 21.09.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-2ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಎಸ್.ಬಿ.ರಮೇಶಪ್ಪ, ಮಾಜಿ ಉಪಾಧ್ಯಕ್ಷರು, ಗ್ರಾಮ ಪಂಚಾಯತಿ, ಕಾಗಿನಲ್ಲಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ರವರು ಶ್ರೀ ಎನ್.ಜಿ.ಶೇಖರಪ್ಪ, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಕಾಗಿನಲ್ಲಿ ಮತ್ತು ಶ್ರೀಮತಿ ಕೆಂಚಮ್ಮ ತಿಮ್ಮನಗೌಡಪ್ಪ, ಮಾಜಿ ಅಧ್ಯಕ್ಷರು, ಗ್ರಾಮ ಪಂಚಾಯತಿ, ಕಾಗಿನಲ್ಲಿ ಇವರುಗಳು ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೈಗೊಳ್ಳಲಾದ ಕಾಲುವೆಗಳ ಹೂಳನ್ನು ತೆಗೆಯುವ ಕಾಮಗಾರಿಯಲ್ಲಿ ಹಾಗೂ ಇತರೆ ಕಾಮಗಾರಿಗಳಲ್ಲಿ ಫೋರ್ಜರಿ ಸಹಿ ಮಾಡಿ ಹಣ ದುರುಪಯೋಗಪಡಿಸಿಕೊಂಡಿದ್ದಾರೆಂದು ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಕಚೇರಿಯು ತನಿಖೆಯನ್ನು ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಈ ಕೆಳಕಂಡ ಅಂಶಗಳು ವ್ಯಕ್ತವಾಗುತ್ತವೆ:-

1. ಚೌಡನಾಯಕನಕೊಪ್ಪ ಗ್ರಾಮದ ಆಂಜನೇಯಸ್ವಾಮಿ ದೇವಸ್ಥಾನದಿಂದ ಸಣ್ಣ ಮಂಜಪ್ಪನ ಮನೆಯವರೆಗೆ ರಸ್ತೆಯ ಎರಡು ಬದಿ ಕಾಲುವೆಯ ಹೂಳೆತ್ತುವ ಕಾಮಗಾರಿಗೆ ಅಂದಾಜು ಪಟ್ಟಿಯಲ್ಲಿ ಹೂಳೆತ್ತಲು ನಮೂದಿಸಲಾದ ದರ ರೂ. 54.06/ಘ.ಮೀ., ಆದರೆ, ಸದರಿ 443.25 ಘ.ಮೀ., ಕಾಮಗಾರಿಗೆ ರೂ. 82.92/ಘ.ಮೀ.,ನಂತೆ ರೂ. 12,792/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲಾಗಿದೆ.

2. ಚೌಡನಾಯಕನಕೊಪ್ಪ ಗ್ರಾಮದ ಆಂಜನೇಯಸ್ವಾಮಿ ದೇವಸ್ಥಾನದಿಂದ ಕಲ್ಲೇರ ಮಂಜಪ್ಪನ ಮನೆಯವರೆಗೆ ರಸ್ತೆಯ ಎರಡು ಬದಿ ಕಾಲುವೆಯ ಹೂಳೆತ್ತುವ ಕಾಮಗಾರಿಗೆ ಅಂದಾಜು ಪಟ್ಟಿಯಲ್ಲಿ ಹೂಳೆತ್ತಲು ನಮೂದಿಸಲಾದ ದರ ರೂ. 54.06/ಘ.ಮೀ., ಆದರೆ, ಸದರಿ 537.75 ಘ.ಮೀ., ಕಾಮಗಾರಿಗೆ ರೂ. 82.92/ಘ.ಮೀ.,ನಂತೆ ರೂ. 15,519/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲಾಗಿದೆ.

3. ಸರ್ಕಾರಿ ಪ್ರೌಢಶಾಲೆಯಿಂದ-ಕಾಳಮ್ಮನ ದೇವಸ್ಥಾನದವರೆಗೂ ರಸ್ತೆಯ ಎರಡೂ ಬದಿ ಕಾಲುವೆಯ ಹೂಳೆತ್ತುವ ಕಾಮಗಾರಿಗೆ ಅಂದಾಜು ಪಟ್ಟಿಯಲ್ಲಿ ಹೂಳೆತ್ತಲು ನಮೂದಿಸಲಾದ ದರ ರೂ. 54.06/ಘ.ಮೀ., ಆದರೆ ಸದರಿ 411.75 ಘ.ಮೀ., ಕಾಮಗಾರಿಗೆ ರೂ.82.92/ಘ.ಮೀ.,ನಂತೆ ರೂ. 11,883/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲಾಗಿದೆ.

ಸದರಿ ಪ್ರಕರಣದಲ್ಲಿ ಮೇಲಿನ ಇಬ್ಬರು ಆಪಾದಿತರಲ್ಲದೇ ಶ್ರೀ ಹೆಚ್.ಸೂರಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಶಿಕಾರಿಪುರ ಇವರೂ ಸಹ ಭಾಗಿಯಾಗಿದ್ದಾರೆಂದು ತಿಳಿಸಿರುತ್ತಾರೆ.

ದೂರುದಾರರು ಮಾಡಿರುವ ದೂರಿನ ಬಗ್ಗೆ ಹಾಗೂ ತನಿಖಾ ವರದಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಆಕ್ಷೇಪಣೆಯನ್ನು ಪಡೆಯಲಾಗಿದ್ದು, ಆಪಾದಿತರು ತಮ್ಮ ವಿರುದ್ಧ ಮಾಡಿರುವ ಆಪಾದನೆಗಳನ್ನು ಅಲ್ಲಗಳೆದಿರುತ್ತಾರೆಂದು ಹಾಗೂ ಸದರಿ ಪ್ರಕರಣದಲ್ಲಿ ಓಂಬುಡ್ಸಮನ್ ರವರು ನೀಡಿರುವ ಆದೇಶದಂತೆ ಪ್ರತಿಯೊಬ್ಬರೂ ರೂ. 13,269/- ಗಳನ್ನು ಸರ್ಕಾರಕ್ಕೆ ಪಾವತಿಸಿರುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀಮತಿ ಕೆಂಚಮ್ಮ ತಿಮ್ಮನಗೌಡಪ್ಪ ಇವರು ಮಾಜಿ ಅಧ್ಯಕ್ಷರಾಗಿದ್ದು, ಪ್ರಸ್ತುತ ಚುನಾಯಿತ ಹುದ್ದೆಯಲ್ಲಿ ಇರುವುದಿಲ್ಲವಾದ ಕಾರಣ ಇವರ ವಿರುದ್ಧದ ಆರೋಪವನ್ನು ಕೈ ಬಿಡಲಾಗಿದೆಯೆಂದು, ಇನ್ನುಳಿದ ಇಬ್ಬರು ಆಪಾದಿತರು ಪ್ರಶ್ನಿತ ಕಾಮಗಾರಿಗಳಿಗೆ ಮಂಜೂರಾದ ಅಂದಾಜಿನಲ್ಲಿ ನಮೂದಿಸಿರುವ ದರದಂತೆ ಹಣವನ್ನು ಪಾವತಿಸದೇ ಹೆಚ್ಚಿಗೆ ರೂ. 40,194/- ಗಳನ್ನು ಪಾವತಿಸಿರುತ್ತಾರೆಂದು, ಸದರಿಯವರುಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ,

ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರುಗಳ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಇಬ್ಬರು ಆಪಾದಿತರು ಪ್ರಶ್ನಿತ ಕಾಮಗಾರಿಗಳಿಗೆ ಮಂಜೂರಾದ ಅಂದಾಜಿನಲ್ಲಿ ನಮೂದಿಸಿರುವ ದರದಂತೆ ಹಣವನ್ನು ಪಾವತಿಸದೇ ಹೆಚ್ಚಿಗೆ ರೂ. 40,194/- ಗಳನ್ನು ಪಾವತಿಸಿರುವುದು ತನಿಖಾ ವರದಿ / ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಸದರಿಯವರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರ ವಿರುದ್ಧದ ಆರೋಪದ ಬಗ್ಗೆ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವಿರುತ್ತದೆ. ಆದ್ದರಿಂದ ಸದರಿ ಇಬ್ಬರು ಆಪಾದಿತ ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 116 ಇಎನ್‌ಕ್ಯೂ 2016 ಬೆಂಗಳೂರು, ದಿನಾಂಕ. 24.10.2016</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಆಪಾದಿತ ನೌಕರರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಎನ್.ಜಿ.ಶೇಖರಪ್ಪ, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಕಾಗಿನಲ್ಲಿ, ಶಿಕಾರಿಪುರ ತಾಲ್ಲೂಕು.
2. ಶ್ರೀ ಹೆಚ್.ಸೂರಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಶಿಕಾರಿಪುರ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.

4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ.
7. ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶ್ರೀ ಎನ್.ಜಿ.ಶೇಖರಪ್ಪ, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಕಾಗಿನಲ್ಲಿ, ಶಿಕಾರಿಪುರ ತಾಲ್ಲೂಕು.
9. ಶ್ರೀ ಹೆಚ್.ಸೂರಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಶಿಕಾರಿಪುರ.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ,ಬಿ&ಸಿ).
12. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮ ಪಂಚಾಯತ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.